ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮದ ಸಮರ್ಪಕ ಅನುಷ್ಠಾನ ಹಾಗೂ ಮೇಲುಸ್ತುವಾರಿಗಾಗಿ ನೋಡಲ್ ಅಧಿಕಾರಿಗಳನ್ನು ನೇಮಿಸುವ ಕುರಿತು.

**ಓದಲಾಗಿದೆ:**

1. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ ಕೇಂದ್ರ ಸರ್ಕಾರ ಇವರ ಎಫ್.ನಂ. 4-4/2014-WW ದಿನಾಂಕ: 22-12-2014.
2. ರಾಜ್ಯ ಮಟ್ಟದ ಕಾರ್ಯಪಡೆಯ ಸರ್ಕಾರಿ ಆದೇಶ ಸಂಖ್ಯೆ: ಮಮಇ 192 ಐಸಿಡಿ 2015, ಬೆಂಗಳೂರು, ದಿನಾಂಕ: 01-06-2015.
3. ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ: ಮಮಇ 192 ಮಮಇ 2015, ದಿನಾಂಕ: 23-07-2015.

**ಪ್ರಸ್ತಾವನೆ:**

ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮವನ್ನು ಮಾನ್ಯ ಪ್ರಧಾನ ಮಂತ್ರಿಗಳು ದಿನಾಂಕ: 22-01-2015ರಂದು ಹರಿಯಾಣ ರಾಜ್ಯದ ಪಾಣಿಪಟ್‌ನಲ್ಲಿ ಉದ್ಘಾಟಿಸಿರುತ್ತಾರೆ. ಈ ಕಾರ್ಯಕ್ರಮವು 0-6 ವರ್ಷದೊಳಗಿನ ಮಕ್ಕಳ ಲಿಂಗಾನುಪಾತವನ್ನು ಉತ್ತಮಗೊಳಿಸುವ ಮುಖ್ಯ ಉದ್ದೇಶ ಹೊಂದಿದ್ದು, ದೇಶಾದ್ಯಂತ ಲಿಂಗಾನುಪಾತ ಅತೀ ಕಡಿಮೆಯಾಗಿರುವ ಒಟ್ಟು 100 ಜಿಲ್ಲೆಗಳಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಅತೀ ಕಡಿಮೆ ಲಿಂಗಾನುಪಾತ ಇರುವ ವಿಜಯಪುರ ಜಿಲ್ಲೆಯಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ.

ಮೇಲೆ ಓದಲಾದ (1)ರ ಪತ್ರದಲ್ಲಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ, ಕೇಂದ್ರ ಸರ್ಕಾರ ಇವರು ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕಾರ್ಯಪಡೆಗಳನ್ನು ಹಾಗೂ ಗ್ರಾಮ ಪಂಚಾಯತಿ ಮಟ್ಟದ ಸಮಿತಿಗಳನ್ನು ರಚಿಸುವಂತೆ ಸೂಚಿಸಿರುತ್ತಾರೆ. ಅದರಂತೆ, ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ, ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಕಾರ್ಯಪಡೆಯನ್ನು ರಚಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರು ಈ ಯೋಜನೆಯ ಅನುಷ್ಠಾನದ ಬಗ್ಗೆ ಪ್ರತಿ ತಿಂಗಳು ಸಾಧಿಸಿದ ಪ್ರಗತಿಯ ವರದಿಯನ್ನು ಭಾರತ ಸರ್ಕಾರಕ್ಕೆ ಕಳುಹಿಸಬೇಕಾಗಿರುತ್ತದೆ ಹಾಗೂ ಪ್ರತಿ ಮೂರು ತಿಂಗಳಿಗೊಮ್ಮೆ ರಾಜ್ಯ ಮಟ್ಟದ ಕಾರ್ಯಪಡೆಯ ಸಭೆಯಲ್ಲಿ ಪ್ರಗತಿಯನ್ನು ಪರಿಶೀಲಿಸಲಾಗುತ್ತಿದೆ. ಆದ್ದರಿಂದ ಈ ಯೋಜನೆಯ ಸಮರ್ಪಕ ಅನುಷ್ಠಾನ, ಮೇಲುಸ್ತುವಾರಿ ಹಾಗೂ ಸಾಧಿಸಿದ ಪ್ರಗತಿಯ ಬಗ್ಗೆ ಮಾಹಿತಿಯನ್ನು ಸಕಾಲದಲ್ಲಿ ನೀಡಲು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಿಂದ ನೋಡಲ್ ಅಧಿಕಾರಿಯನ್ನು ಶೀಘ್ರವಾಗಿ ನೇಮಿಸಲು ಕೋರಿರುತ್ತಾರೆ.

ಆದುದರಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿಯಾನ ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ (ಸಂಜೀವಿನಿ), (Mission Director, National Rural Livelyhood Mission) ಇವರನ್ನು ರಾಜ್ಯ ಮಟ್ಟದ ನೋಡಲ್ ಅಧಿಕಾರಿಯಾಗಿ ಈ ಕೆಳಗಿನಂತೆ ನೇಮಿಸಿ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 150 ಜಿಪಸ 2015, ಬೆಂಗಳೂರು, ದಿನಾಂಕ: 01-09-2015**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ, ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮದ ಸಮರ್ಪಕ ಅನುಷ್ಠಾನಕ್ಕಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿಯಾನ ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ (ಸಂಜೀವಿನಿ), (Mission Director, National Rural Livelyhood Mission) ಇವರನ್ನು ರಾಜ್ಯ ಮಟ್ಟದ ನೋಡಲ್ ಅಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1) ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು.
3) ಅಭಿಯಾನ ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, (ಸಂಜೀವಿನಿ) ಕೆ.ಎಸ್.ಆರ್.ಎಲ್.ಪಿ.ಎಸ್. ಕರ್ನಾಟಕ ಕೊಳಗೇರಿ, ಅಭಿವೃದ್ಧಿ ಮಂಡಳಿ ಕಟ್ಟಡ, ನಂ. 55, ಅಭಯ ಕಾಂಪ್ಲೆಕ್ಸ್, 4ನೇ ಮಹಡಿ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು–560020.
4) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು/ದಂಡಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿ.
5) ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ
7) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.